ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:28-01-2022

## ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿ:14.01.2022 ಮತ್ತು ದಿನಾಂಕ:24.01.2022.

* * * * * * *

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದ್ದು, ಪ್ರಸ್ತುತ 2021-22ನೇ ಶೈಕ್ಷಣಿಕ ಸಾಲಿನಿಂದ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅರ್ಹ ಅತಿಥಿ ಉಪನ್ಯಾಸಕರನ್ನು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಈ ಕೆಳಕಂಡಂತೆ ನೀಡಿರುವ ಮಾರ್ಗಸೂಚಿಗಳನ್ವಯ ಅತಿಥಿ ಉಪನ್ಯಾಸಕರನ್ನು ಪಾರದರ್ಶಕವಾಗಿ ಆಯ್ಕೆ ಮಾಡಲಾಗುವುದು. ಅತಿಥಿ ಉಪನ್ಯಾಸಕರ ಸೇವೆಗೆ ಸಂಬಂಧಿಸಿದ ನಿಬಂಧನೆಗಳು ಈ ಕೆಳಗಿನಂತಿರುತ್ತವೆ.

1) ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಕಲಾ/ವಾಣಿಜ್ಯ ವಿಷಯಗಳಿಗೆ ಗರಿಷ್ಠ 8 ಗಂಟೆ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ10 ಗಂಟೆಗಳ ಬದಲಾಗಿ, ಕಲಾ/ವಾಣಿಜ್ಯ ವಿಷಯಗಳಿಗೆ ಗರಿಷ್ಠ 15 ಗಂಟೆ ಹಾಗೂ ವಿಜ್ಞಾನ ವಿಷಯಗಳು/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ19 ಗಂಟೆಗಳ ಕಾರ್ಯಭಾರವನ್ನು ನೀಡಿ, ಕೆಳಗಿನಂತೆ ಗೌರವಧನವನ್ನು ಹೆಚ್ಚಿಸಲಾಗಿದೆ.

   ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

   ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

   ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

   ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

. . . . . 2

2) ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಅವಧಿಗೆ ಬದಲಾಗಿ ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ) ನೇಮಕ ಮಾಡಿಕೊಳ್ಳುವುದು.

3) ಅತಿಥಿ ಉಪನ್ಯಾಸಕರ ಗೌರವಧನವನ್ನು ಪ್ರತಿ ತಿಂಗಳು 10ನೇ ತಾರೀಖಿನ ಒಳಗೆ ಪಾವತಿ ಮಾಡುವುದು.

4) ಅತಿಥಿ ಉಪನ್ಯಾಸಕರಾಗಿ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿದವರಿಗೆ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಪ್ರಾಧಾನ್ಯತೆ ಕೊಡುವುದು. ಇದಕ್ಕೆ ಸಂಬಂಧಪಟ್ಟ ಹಾಗೆ ಪ್ರಸ್ತುತ ಇಲಾಖೆಯಲ್ಲಿ ಅನುಸರಿಸುತ್ತಿರುವ ಮಾನದಂಡಗಳನ್ವಯ ಆಯ್ಕೆ ಪಟ್ಟಿ ತಯಾರಿಸುವುದು.

5) ಅತಿಥಿ ಉಪನ್ಯಾಸಕರಿಗೆ ಸಂಬಂಧಪಟ್ಟ ಕಾಲೇಜಿನಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಲಭ್ಯವಿಲ್ಲದಿದ್ದರೆ, ಅಂತಹ ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರವಿರುವ ಇತರೆ ಸರ್ಕಾರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಲು ಸೂಚಿಸುವುದು. ಇದರ ಹೊರತಾಗಿಯೂ 15/19 ಗಂಟೆಗಳಿಗಿಂತ ಕಡಿಮೆ ಕಾರ್ಯಭಾರವಿದ್ದಲ್ಲಿ ಎಷ್ಟು ಗಂಟೆಗಳ ಕಾರ್ಯಭಾರ ಉಪಲಬ್ಧವಿದೆಯೋ ಅದಕ್ಕೆ ಅನುಗುಣವಾಗಿ ಗೌರವಧನ ಪಾವತಿಸುವುದು.

6) ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆ ಹೊಂದಲು 3 ವರ್ಷಗಳ ಕಾಲಾವಧಿ ನೀಡುವುದು. 3 ವರ್ಷಗಳ ನಂತರ ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು.

7) ಅತಿಥಿ ಉಪನ್ಯಾಸಕರ ಆಯ್ಕೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿಗಳಲ್ಲಿ ಅವರ ವಿದ್ಯಾರ್ಹತೆ, ಸೇವಾ ಅನುಭವ ಮತ್ತಿತರೆ ವಿವರಗಳನ್ನು ಆಧರಿಸಿ ಈ ಕೆಳಕಂಡ ಮಾನದಂಡಗಳನ್ವಯ ರಾಜ್ಯವ್ಯಾಪಿ ವಿಷಯವಾರು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು (Provisional List) ಸಿದ್ಧಪಡಿಸಲಾಗಿದೆ.

| **ಕ್ರ. ಸಂ.** | **ವಿದ್ಯಾರ್ಹತೆ** | **ಗರಿಷ್ಠ ಅಂಕಗಳು** |
|---|---|---|
| 1. | <u>ವಿದ್ಯಾರ್ಹತೆ:</u><br>ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25%ನ್ನು ಗಣನೆಗೆ ತೆಗೆದುಕೊಳ್ಳುವುದು.<br>*(ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 25ರಷ್ಟು ಭಾಗವನ್ನು ಅಂದರೆ 15 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು).* | 25 |
| 2. | <u>ಹೆಚ್ಚುವರಿ ವಿದ್ಯಾರ್ಹತೆ:</u><br>1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2) ಎನ್ಇಟಿ/ಕೆ-ಸೆಟ್/ಎಸ್ಎಲ್ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | <br>12<br>09<br>06 |

| | | |
|---|---|---|
| 3. | <u>ಅನುಭವ:</u><br>ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಾತ್ರ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳನ್ನು ಮಿತಿಗೊಳಿಸುವುದು. *(ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್ ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು)* | 48 |
| | ಒಟ್ಟು | 100 |
| | ಸೂಚನೆ: ವಿಕಲಚೇತನ ಅಭ್ಯರ್ಥಿಗಳಿಗೆ 10 ಅಂಕಗಳನ್ನು ಹೆಚ್ಚುವರಿಯಾಗಿ ನೀಡುವುದು. | |

8) ಸದರಿ ಆಯ್ಕೆಪಟ್ಟಿಯನ್ವಯ ಅಭ್ಯರ್ಥಿಗಳು ಆನ್‌ಲೈನ್ ಕೌನ್ಸಿಲಿಂಗ್ ಸಮಯದಲ್ಲಿ ಆಯ್ಕೆ ಮಾಡಿಕೊಳ್ಳುವ ಕಾಲೇಜುಗಳ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಕಾಲೇಜುಗಳ ಹಂತದಲ್ಲಿ ಪ್ರಾಂಶುಪಾಲರು ಅತಿಥಿ ಉಪನ್ಯಾಸಕರ ಅಗತ್ಯ ದಾಖಲಾತಿಗಳನ್ನು ಪರಿಶೀಲಿಸಿಕೊಂಡು ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವುದು. ಕರ್ತವ್ಯಕ್ಕೆ ಹಾಜರಾದ ಅತಿಥಿ ಉಪನ್ಯಾಸಕರ ಮಾಹಿತಿಯನ್ನು ಕಡ್ಡಾಯವಾಗಿ ಇ.ಐ.ಎಂ.ಎಸ್.ನಲ್ಲಿ ದಾಖಲಿಸುವುದು.

9) ಆಯ್ಕೆಯಾದ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವ ಮುನ್ನ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಸಲ್ಲಿಸಿರುವ ವಿವರಗಳಂತೆ ಅವರ ವಿದ್ಯಾರ್ಹತೆ ಮತ್ತು ಸೇವಾ ಅವಧಿಯ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ, ದಾಖಲೆಗಳು ಕ್ರಮಬದ್ಧವಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು. ಒಂದು ವೇಳೆ ಅಭ್ಯರ್ಥಿಗಳು ಹಾಜರುಪಡಿಸುವ ವಿದ್ಯಾರ್ಹತೆಯ ಅಂಕಪಟ್ಟಿಗಳು ಹಾಗೂ ಸೇವಾ ಅವಧಿಯ ಪ್ರಮಾಣ ಪತ್ರಗಳಲ್ಲಿ ಏನಾದರೂ ತಪ್ಪು/ನ್ಯೂನ್ಯತೆ ಅಥವಾ ನಕಲಿ ಎಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಿ, ಮಾಹಿತಿಯನ್ನು ಕೂಡಲೇ ಕೇಂದ್ರ ಕಛೇರಿಗೆ ಸಲ್ಲಿಸುವುದು. ಅನರ್ಹಗೊಂಡ ಅಭ್ಯರ್ಥಿಗಳ ಬದಲಿಗೆ ಬೇರೆ ಅತಿಥಿ ಉಪನ್ಯಾಸಕರನ್ನು ಒದಗಿಸಲು ಈ ಕಛೇರಿಯಿಂದ ಕ್ರಮ ವಹಿಸಲಾಗುವುದು.

10) ಕರ್ತವ್ಯಕ್ಕೆ ಹಾಜರಾದ ಅತಿಥಿ ಉಪನ್ಯಾಸಕರ ವಿವರ/ದಾಖಲಾತಿಗಳೊಂದಿಗೆ ಆಯಾ ವಲಯದ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಪ್ರಸ್ತಾವನೆಯನ್ನು ಸಲ್ಲಿಸಿ, ಕಡ್ಡಾಯವಾಗಿ ಅನುಮೋದನೆಯನ್ನು ಪಡೆಯುವುದು. ಕಾಲೇಜುಗಳಲ್ಲಿ ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರ ಅನುಮೋದನೆಗಾಗಿ ಪ್ರಾಂಶುಪಾಲರಿಂದ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಪ್ರಾದೇಶಿಕ ಜಂಟಿ ನಿರ್ದೇಶಕರು ನಿಯಮಾನುಸಾರ ಪರಿಶೀಲಿಸಿ, ವಿಳಂಬಕ್ಕೆ ಆಸ್ಪದ ನೀಡದೆ, ಅನುಮೋದನೆ ನೀಡುವ ಬಗ್ಗೆ ಅಗತ್ಯ ಕ್ರಮವಹಿಸುವುದು.

.....4

11) ಅತಿಥಿ ಉಪನ್ಯಾಸಕರಿಗೆ ಕಲಾ & ವಾಣಿಜ್ಯ ವಿಭಾಗಗಳಲ್ಲಿ 15 ಗಂಟೆಗಳ ಕಾರ್ಯಭಾರವನ್ನು ಹಾಗೂ ವಿಜ್ಞಾನ/ಪ್ರಾಯೋಗಿಕ ವಿಷಯಗಳಿಗೆ 19 ಗಂಟೆಗಳ ಕಾರ್ಯಭಾರವನ್ನು ಮಾತ್ರ ಹಂಚಿಕೆ ಮಾಡುವುದು. ಒಂದು ವೇಳೆ ಭಾಗಶಃ ಕಾರ್ಯಭಾರ ಕಡಿಮೆ ಇದ್ದಲ್ಲಿ ಕನಿಷ್ಠ 4 ಗಂಟೆಗಳು ಹಾಗೂ ಅದಕ್ಕಿಂತ ಹೆಚ್ಚಿನ ಉಳಿಕೆ ಕಾರ್ಯಭಾರವನ್ನು ಹಂಚಿಕೆ ಮಾಡುವುದು.

12) ಅತಿಥಿ ಉಪನ್ಯಾಸಕರು ತಮಗೆ ವಹಿಸಿದ ಕಾರ್ಯಭಾರವನ್ನು ನಿರ್ವಹಿಸುವುದರೊಂದಿಗೆ ಪ್ರಾಂಶುಪಾಲರು ವಹಿಸುವ ಇತರೆ ಶೈಕ್ಷಣಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವುದು.

13) ಅಭ್ಯರ್ಥಿಗಳು ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನಮೂದಿಸಿರುವ ವಿದ್ಯಾರ್ಹತೆಗಳನ್ನು ಮಾತ್ರ ಪರಿಗಣಿಸಿ, ಗೌರವಧನವನ್ನು ನಿಗದಿಪಡಿಸತಕ್ಕದ್ದು. (ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಸಂಬಂಧಿಸಿದ ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರಗಳನ್ನು ಹೊಂದಿರಬೇಕು) ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಅವಧಿಯ ನಂತರ ಪಡೆಯುವ ಹೆಚ್ಚುವರಿ ವಿದ್ಯಾರ್ಹತೆಗಳಾದ ಪಿ.ಹೆಚ್.ಡಿ, ಎನ್.ಇ.ಟಿ., ಮತ್ತು ಎಸ್.ಎಲ್.ಇ.ಟಿ. ಪದವಿಗಳನ್ನು ಆ ಶೈಕ್ಷಣಿಕ ವರ್ಷದಲ್ಲಿ ಪರಿಗಣಿಸಿ, ಗೌರವಧನ ಪರಿಷ್ಕರಿಸಲು ಅವಕಾಶವಿರುವುದಿಲ್ಲ.

14) ಅತಿಥಿ ಉಪನ್ಯಾಸಕರ ಆಯ್ಕೆಯಲ್ಲಿ ಸಂಬಂಧಪಟ್ಟ ವಿಷಯ ಹಾಗೂ ಸರ್ಕಾರ ಅಧಿಸೂಚಿಸಿರುವ ಸಮಾನಾಂತರ ವಿಷಯಗಳನ್ನು ಮಾತ್ರ ಪರಿಗಣಿಸುವುದು ಹಾಗೂ ಆಯಾ ವಿಶ್ವವಿದ್ಯಾಲಯಗಳು ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿರುವವರನ್ನು ಪರಿಗಣಿಸುವುದು.

15) ಅತಿಥಿ ಉಪನ್ಯಾಸಕರುಗಳಿಗೆ ನಿಗಧಿಪಡಿಸಿರುವ ಬೋಧನಾ ಕಾರ್ಯಭಾರದ ವಿವರ ಮತ್ತು ಅದನ್ನು ನಿರ್ವಹಿಸಿರುವ ಬಗ್ಗೆ (ಶೈಕ್ಷಣಿಕ ವೇಳಾ ಪಟ್ಟಿಯೊಂದಿಗೆ) ಸಂಬಂಧಿಸಿದ ವಿಭಾಗದ ಮುಖ್ಯಸ್ಥರು, ಪ್ರತಿ ತಿಂಗಳು ಪ್ರಾಂಶುಪಾಲರಿಗೆ ನೀಡುವುದು ವಿಭಾಗದಲ್ಲಿ/ವಿಷಯದಲ್ಲಿ ಖಾಯಂ ಉಪನ್ಯಾಸಕರು ಇಲ್ಲದಿದ್ದಲ್ಲಿ ಪ್ರಾಂಶುಪಾಲರೇ ವರದಿಯನ್ನು ಸಿದ್ಧಪಡಿಸುವುದು. ಸದರಿ ವರದಿ ಹಾಗೂ ಹಾಜರಾತಿಯನ್ನು ಪ್ರಾಂಶುಪಾಲರು ದೃಢೀಕರಿಸಿ ಪ್ರತಿ ತಿಂಗಳು ಅತಿಥಿ ಉಪನ್ಯಾಸಕರ ಅನುಮೋದನಾ ಪ್ರಾಧಿಕಾರವಾದ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

16) ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ತಾತ್ಕಾಲಿಕ ವ್ಯವಸ್ಥೆಯಡಿ ಆಯ್ಕೆ ಮಾಡಿಕೊಳ್ಳುವುದರಿಂದ ಸದರಿ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಖಾಯಂ ಮಾಡಲು ಮತ್ತು ಸಹಾಯಕ ಪ್ರಾಧ್ಯಾಪಕರ ಹುದ್ದೆಯ ನೇಮಕಾತಿಯಲ್ಲಿ ಆದ್ಯತೆ ನೀಡಲು ಅವಕಾಶ ಇರುವುದಿಲ್ಲ ಹಾಗೂ ಈ ಬಗ್ಗೆ ಕೃಪಾಂಕ ಕೋರಲು ಸಹ ಯಾವುದೇ ಹಕ್ಕು ಇರುವುದಿಲ್ಲ.

. . . . . 5

17) ಹೊಸ ನೇಮಕಾತಿ/ವರ್ಗಾವಣೆ/ನಿಯೋಜನೆ ಹಾಗೂ ಇನ್ನಿತರ ಕಾರಣದಿಂದಾಗಿ ಖಾಯಂ ಉಪನ್ಯಾಸಕರು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದಾಗ ಅಥವಾ ಸೆಮಿಸ್ಟರ್ ಅವಧಿಯಲ್ಲಿ ಕಾರ್ಯಭಾರ ಕಡಿಮೆಯಾದಾಗ ಅಥವಾ ಇತರೆ ಕಾರಣಗಳಿಂದ ಕಾರ್ಯಭಾರ ಕಡಿಮೆಯಾದಾಗ ಸಂಬಂಧಪಟ್ಟ ಕಾಲೇಜಿನ ಆಯ್ಕೆ ಪಟ್ಟಿಯಲ್ಲಿ ಕಡಿಮೆ ಅಂಕ ಪಡೆದಿರುವ / ಕೊನೆಯಲ್ಲಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಲಾಗುತ್ತದೆ. ಈ ಮಾಹಿತಿಯನ್ನು ಸಂಬಂಧಪಟ್ಟ ಪ್ರಾಂಶುಪಾಲರು ಕೇಂದ್ರ ಕಛೇರಿಗೆ ವರದಿ ಸಲ್ಲಿಸುವುದು. ಈ ರೀತಿ ಸೇವೆಯಿಂದ ಬಿಡುಗಡೆಗೊಂಡ ಅತಿಥಿ ಉಪನ್ಯಾಸಕರಿಗೆ ಇತರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯಭಾರ ಉಪಲಬ್ಧವಿದ್ದಲ್ಲಿ ಜ್ಯೇಷ್ಠತೆಯನುಸಾರ ಕಾರ್ಯನಿರ್ವಹಿಸಲು ಅವಕಾಶ ನೀಡಲಾಗುವುದು.

18) ಖಾಯಂ ಅಧ್ಯಾಪಕರುಗಳು ವರ್ಗಾವಣೆ/ನಿಯೋಜನೆ/ವಯೋನಿವೃತ್ತಿ/ಸ್ವಯಂ ನಿವೃತ್ತಿ/ನಿಧನ ಹಾಗೂ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ವಿವಿಧ ಕಾರಣಗಳಿಂದ ಕರ್ತವ್ಯದಿಂದ ಬಿಡುಗಡೆ ಹೊಂದಿದಲ್ಲಿ ಸದರಿ ಕಾರ್ಯಭಾರವನ್ನು ನಿರ್ವಹಿಸಲು ಅಗತ್ಯವಿರುವ ಅತಿಥಿ ಉಪನ್ಯಾಸಕರ ಬೇಡಿಕೆಯನ್ನು ಕಾರ್ಯಭಾರದ ಮಾಹಿತಿಯೊಂದಿಗೆ ಕೇಂದ್ರ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವುದಲ್ಲಿ ಆಯ್ಕೆಪಟ್ಟಿಯಲ್ಲಿರುವ ಅಭ್ಯರ್ಥಿಯೊಬ್ಬರನ್ನು ಸಂಬಂಧಪಟ್ಟ ಕಾಲೇಜಿಗೆ ನಿಯೋಜಿಸಲಾಗುವುದು.

19) ಮಹಿಳಾ ಅತಿಥಿ ಉಪನ್ಯಾಸಕರು ಪ್ರಸೂತಿಗೆ ತೆರಳಿದ ಸಂದರ್ಭದಲ್ಲಿ ಅವರ ಕಾರ್ಯವನ್ನು ನಿರ್ವಹಿಸಲು ಅಗತ್ಯವಿರುವ ಅತಿಥಿ ಉಪನ್ಯಾಸಕರ ಬೇಡಿಕೆಯನ್ನು ಕಾರ್ಯಭಾರದ ಮಾಹಿತಿಯೊಂದಿಗೆ ಕೇಂದ್ರ ಕಛೇರಿಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ, ಆಯ್ಕೆಪಟ್ಟಿಯಲ್ಲಿರುವ ಅಭ್ಯರ್ಥಿಯೊಬ್ಬರನ್ನು ಸಂಬಂಧಪಟ್ಟ ಕಾಲೇಜಿಗೆ ನಿಯೋಜಿಸಲಾಗುವುದು. ಮಹಿಳಾ ಅತಿಥಿ ಉಪನ್ಯಾಸಕರು ಪ್ರಸೂತಿಯಿಂದ ಹಿಂದಿರುಗಿ ಬಂದಾಗ ಅವರ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಕೈಬಿಟ್ಟು ಪುನಃ ಅದೇ ಮಹಿಳಾ ಅಭ್ಯರ್ಥಿಯನ್ನೇ ಮುಂದುವರೆಸಿ ಅವರ ಸೇವೆಯನ್ನು ಅದೇ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಬಳಸಿಕೊಳ್ಳುವುದು.

20) ಅತಿಥಿ ಉಪನ್ಯಾಸಕರುಗಳು ತಾತ್ಕಾಲಿಕ ವ್ಯವಸ್ಥೆಯಡಿ ಆಯ್ಕೆಗೊಳ್ಳುವುದರಿಂದ ಅವರುಗಳಿಗೆ ಗೌರವಧನವನ್ನು ಹೊರತುಪಡಿಸಿ ಪೂರ್ಣಕಾಲಿಕ ಸಿಬ್ಬಂದಿಗಳಿಗೆ ಇರುವಂತೆ ಯಾವುದೇ ಸೌಲಭ್ಯಗಳನ್ನು ನೀಡಲು ಅವಕಾಶವಿರುವುದಿಲ್ಲ.

21) ಕಾಲೇಜುಗಳಿಗೆ ಆಯ್ಕೆಯಾಗುವ ಅತಿಥಿ ಉಪನ್ಯಾಸಕರು ಪದೇ ಪದೇ ಕರ್ತವ್ಯಕ್ಕೆ ಗೈರು ಹಾಜರಾದರೆ, ಪಾಠ-ಪ್ರವಚನಗಳನ್ನು ಸರಿಯಾಗಿ ನಿರ್ವಹಿಸದಿದ್ದರೆ, ಅವರ ವಿರುದ್ಧ ಗಂಭೀರ ಆರೋಪಗಳು ಕೇಳಿ ಬಂದಲ್ಲಿ ಅಥವಾ ಕರ್ತವ್ಯ ಲೋಪ / ಅಶಿಸ್ತು ಕಂಡುಬಂದಲ್ಲಿ ಅಂತಹ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಕೈಬಿಡಲು ಸಂಬಂಧಪಟ್ಟ ಪ್ರಾಂಶುಪಾಲರು ಸೂಕ್ತ ದಾಖಲೆಗಳೊಂದಿಗೆ ವರದಿಯನ್ನು ಕೂಡಲೇ

ಆಯಾ ವಲಯದ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಸಲ್ಲಿಸುವುದು. ಜಂಟಿ ನಿರ್ದೇಶಕರು ಈ ಬಗ್ಗೆ ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಜರುಗಿಸುವುದು.

**ಆಯುಕ್ತರು**
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ;**

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.

**ಪ್ರತಿಯನ್ನು ಮಾಹಿತಿಗಾಗಿ;**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಆಯುಕ್ತರು, ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಹೆಚ್ಚುವರಿ ನಿರ್ದೇಶಕರು, ಜಂಟಿ ನಿರ್ದೇಶಕರು(ಶೈಕ್ಷಣಿಕ) ರವರ ಆಪ್ತ ಶಾಖೆ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಮ್ಯಾನೇಜರ್/ಅಧೀಕ್ಷಕರು, ವರ್ಗಾವಣೆ & ನಿಯೋಜನೆ ವಿಭಾಗ, ಯೋಜನೆ & ಆಯವ್ಯಯ ವಿಭಾಗ, ಶೈಕ್ಷಣಿಕ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4. ಕಛೇರಿ ಪ್ರತಿ